**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ:ಎ8/ವಿ.ಸಾ.ಸೌ.ವಿ/50/2020-21 ದಿನಾಂಕ:22.03.2021

**:: ಸುತ್ತೋಲೆ ::**

ವಿಷಯ: ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ವಿಶೇಷ ಸೌಲಭ್ಯ ಮತ್ತು ವಿನಾಯಿತಿಗಳನ್ನು ನೀಡುವ ಕುರಿತು.

ಉಲ್ಲೇಖ:
1. ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ/ಅಧಿಸೂಚನೆ/2021/ 48/2020-21 ದಿನಾಂಕ: 19.01.2021.
2. ಸರ್ಕಾರದ ಆದೇಶ ಸಂಖ್ಯೆ: ಇಪಿ 62 ಎಸ್ಎಲ್‌ಬಿ 2021 ದಿನಾಂಕ:15.03.2021.
3. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ:17.03.2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ವಿಶೇಷ ಸೌಲ್ಯಭ್ಯ ಮತ್ತು ವಿನಾಯಿತಿಗಳನ್ನು ನೀಡುವ ಬಗ್ಗೆ ಉಲ್ಲೇಖಿತ-1ರ ಅಧಿಸೂಚನೆಯಲ್ಲಿ ವಿವರಿಸಲಾಗಿದೆ ಮತ್ತು ಈ ವಿದ್ಯಾರ್ಥಿಗಳಿಗೆ ಸದರಿ ಸೌಲಭ್ಯಗಳನ್ನು ನೀಡಲು ಸೂಕ್ತಕ್ರಮಕೈಗೊಂಡು ಜೂನ್ 2021ರ ಮುಖ್ಯ ಪರೀಕ್ಷೆಗೆ ದಿನಾಂಕ:15.03.2021ರೊಳಗಾಗಿ ಆನ್‌ಲೈನ್ ಮುಖಾಂತರ ನೋಂದಾಯಿಸಲು ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದ ಅನುದಾನಿತ/ಅನುದಾನ ರಹಿತ ಖಾಸಗಿ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಸೂಚಿಸಲಾಗಿರುತ್ತದೆ.

ಉಲ್ಲೇಖಿತ-2ರ ಸರ್ಕಾರದ ಆದೇಶದಲ್ಲಿ ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ವಿಶೇಷ ಸೌಲಭ್ಯ / ವಿನಾಯಿತಿಗಳನ್ನು 2020-21ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಿಂದ ಅನ್ವಯವಾಗುವಂತೆ ನೀಡಿ ಆದೇಶಿಸಲಾಗಿದೆ. ಸದರಿ ಆದೇಶವನ್ನು ಉಲ್ಲೇಖಿತ-3ರ ಈ ಕಛೇರಿ ಸುತ್ತೋಲೆ ದಿನಾಂಕ:17.03.2021ರಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ). ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಎಲ್ಲಾ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳಿಗೆ ಮಂಡಳಿ ಜಾಲತಾಣ ಮತ್ತು ಶಾಲಾ ಲಾಗಿನ್ ಮುಖಾಂತರ ರವಾನಿಸಲಾಗಿದೆ.

ಉಲ್ಲೇಖಿತ-2ರ ಸರ್ಕಾರದ ಆದೇಶದಲ್ಲಿ ಕೆಲವು ಹೆಚ್ಚುವರಿ ಸೌಲಭ್ಯಗಳನ್ನು ನೀಡಲಾಗಿರುತ್ತದೆ. ಉದಾಹರಣೆಗೆ ಅಂಧ / ದೃಷ್ಟಿಮಾಂದ್ಯ / ಕ್ಷೀಣ ದೃಷ್ಟಿ ವಿದ್ಯಾರ್ಥಿಗಳಿಗೆ ಈ ಹಿಂದೆ ಗಣಿತ ಮತ್ತು ವಿಜ್ಞಾನ ವಿಷಯಗಳ ಬದಲು ಸಮಾಜಶಾಸ್ತ್ರ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಕರ್ನಾಟಕ ಸಂಗೀತ ಅಥವಾ ಹಿಂದೂಸ್ತಾನಿ ಸಂಗೀತ ವಿಷಯಗಳಲ್ಲಿ ಯಾವುದಾದರೂ ಎರಡು ವಿಷಯಗಳನ್ನು ಸಮಾಜ ವಿಜ್ಞಾನದ ಜೊತೆಗೆ ಆಯ್ಕೆಮಾಡಿಕೊಳ್ಳಲು, ಬರಹಗಾರರ ಸೌಲ್ಯಭ್ಯ ಪಡೆಯಲು ಹಾಗೂ ಹೆಚ್ಚುವರಿ ಸಮಯ ಪಡೆಯಲು ಅವಕಾಶವಿತ್ತು. ಈ ಸೌಲಭ್ಯಗಳ ಜೊತೆಗೆ ಉಲ್ಲೇಖ-2ರ ಸರ್ಕಾರದ ಆದೇಶದಲ್ಲಿ ಶಿಕ್ಷಣ ಮಾಧ್ಯಮದ ಒಂದು ಭಾಷೆಯನ್ನು ಮಾತ್ರ ಅಭ್ಯಾಸ ಮಾಡಿ ಉಳಿದ ಎರಡು ಭಾಷೆಗಳಿಗೆ ವಿನಾಯಿತಿ ನೀಡಿ ಆದೇಶಿಸಲಾಗಿದೆ.

ಜೂನ್-2021ರ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆಗೆ ವಿದ್ಯಾರ್ಥಿಗಳ ನೋಂದಣಿಯನ್ನು ಆಲ್‌ನೈನ್ ಮುಖಾಂತರ ಮಂಡಳಿ ಜಾಲತಾಣದಲ್ಲಿ ನಮೂದಿಸುವ ಅವಧಿಯು ದಿನಾಂಕ:15.03.2021ಕ್ಕೆ ಮುಕ್ತಾಯವಾಗಿದ್ದು, ವಿಭಿನ್ನಸಾಮರ್ಥ್ಯವುಳ್ಳ ಮಕ್ಕಳಿಗೆ ಹೆಚ್ಚುವರಿ ಸೌಲಭ್ಯ ನೀಡಿರುವ ಸರ್ಕಾರದ ಆದೇಶವನ್ನು ದಿನಾಂಕ:17.03.2021ರಂದು ರವಾನಿಸಲಾಗಿರುವುದರಿಂದ, ಉಲ್ಲೇಖ-2ರ ಹೆಚ್ಚುವರಿ ಸೌಲಭ್ಯವನ್ನು ನೀಡಲು ಮುಖ್ಯಶಿಕ್ಷಕರಿಗೆ ಸಾಧ್ಯವಾಗದಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದ ಅನುದಾನಿತ/ಅನುದಾನ ರಹಿತ ಖಾಸಗಿ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಈ ಮೂಲಕ ತಿಳಿಸುವುದೇನೆಂದರೆ ಈಗಾಗಲೇ ತಮಗೆ ರವಾನಿಸಿರುವ ಉಲ್ಲೇಖ-2ರ ಸರ್ಕಾರಿ ಆದೇಶದಲ್ಲಿ ವಿವರಿಸಿರುವ ವಿಶೇಷ ಸೌಲಭ್ಯ ಮತ್ತು ವಿನಾಯಿತಿಗಳನ್ನು ಅರ್ಹ ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ನೀಡುವುದು ನಮ್ಮ ನಿಮ್ಮೆಲ್ಲರ ಆದ್ಯಕರ್ತವ್ಯವಾಗಿರುತ್ತದೆ. ಆದ್ದರಿಂದ ಜೂನ್-2021ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಈ ಸೌಲಭ್ಯಗಳನ್ನು ನೀಡಲು ಸದರಿ ಆದೇಶದಲ್ಲಿ ವಿವರಿಸಿರುವಂತೆ ಉಪನಿರ್ದೇಶಕರು (ಆಡಳಿತ)ರವರಿಂದ ಪಡೆದ ಅನುಮತಿ ಪತ್ರ ಮತ್ತು ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಮುಖ್ಯ ಶಿಕ್ಷಕರು ದಿನಾಂಕ:06.04.2021ರೊಳಗೆ ಮಂಡಳಿಗೆ ನೇರವಾಗಿ ಸಲ್ಲಿಸಲು ತಿಳಿಸಿದೆ.

ಯಾವುದೇ ಕಾರಣಕ್ಕೂ ಯಾವುದೇ ಒಬ್ಬ ವಿದ್ಯಾರ್ಥಿಯೂ ಈ ಸೌಲಭ್ಯಗಳಿಂದ ವಂಚಿತರಾಗದಂತೆ ಅಗತ್ಯಕ್ರಮವಹಿಸಲು ತಿಳಿಸಿದೆ. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ನಿಮ್ಮನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು ಮತ್ತು ಸೂಕ್ತಕ್ರಮಕ್ಕೆ ಸಕ್ಷಮ ಪ್ರಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು. ಆದ್ದರಿಂದ ಇದಕ್ಕೆ ಅವಕಾಶ ನೀಡದಂತೆ ಕೂಡಲೇ ಅಗತ್ಯ ದಾಖಲೆಗಳೊಂದಿಗೆ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದೆ.

(ವಿ. ಸುಮಂಗಲಾ)
ನಿರ್ದೇಶಕರು, ಪರೀಕ್ಷೆಗಳು

ಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಮುಂದಿನ ಸೂಕ್ತ ಕ್ರಮ್ಕಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಮುಂದಿನ ಸೂಕ್ತ ಕ್ರಮ್ಕಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕಶಾಖೆರವರು ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.
6. ಕಛೇರಿ ಪ್ರತಿ.